ಕರ್ನಾಟಕ ಸರ್ಕಾರ

ಸಂಖ್ಯೆ: ಗ್ರಾಅಪ 143 ಜಿಪಸ 2019

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿಗಳ ಕಟ್ಟಡ,
ಬೆಂಗಳೂರು, ದಿನಾಂಕ:28-10-2019.

ಇವರಿಂದ:

ಸರ್ಕಾರದ ಪ್ರಧಾನ ಕಾರ್ಯದರ್ಶಿ(ಪಂ.ರಾಜ್),
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ,
ಬಹುಮಹಡಿ ಕಟ್ಟಡ,
ಬೆಂಗಳೂರು.

ಇವರಿಗೆ,

ರಾಜ್ಯದ ಎಲ್ಲಾ ಮುಖ್ಯಕಾರ್ಯನಿರ್ವಾಹಕ ಅಧಿಕಾರಿಗಳು,
ಜಿಲ್ಲಾ ಪಂಚಾಯಿತಿ.

ರಾಜ್ಯ ಎಲ್ಲಾ ಕಾರ್ಯನಿರ್ವಾಹಕ ಅಧಿಕಾರಿಗಳು,
ತಾಲ್ಲೂಕು ಪಂಚಾಯಿತಿ.

ಮಾನ್ಯರೆ,

**ವಿಷಯ:** ದಿನಾಂಕ:04-11-2019 ರಂದು ಮಕ್ಕಳ ಗ್ರಾಮ ಸಭೆಯ ಕುರಿತು ಹಾಗೂ ಇಲಾಖೆಯ ಕಾರ್ಯಕ್ರಮಗಳ ಕುರಿತು ಉಪಗ್ರಹ ಆಧಾರಿತ ತರಬೇತಿಯನ್ನು ಆಯೋಜಿಸುವ ಬಗ್ಗೆ.

******

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ದಿನಾಂಕ:04-11-2019 ರಂದು ಬೆಳಿಗ್ಗೆ 10:00 ಗಂಟೆಯಿಂದ 1:00 ಗಂಟೆಯ ವರೆಗೆ **"ಮಕ್ಕಳ ಗ್ರಾಮ ಸಭೆಯ ಕುರಿತು"** ಹಾಗೂ 2:00 ಗಂಟೆಯಿಂದ 5:30ರವರೆಗೆ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಕಾರ್ಯಕ್ರಮಗಳ ಕುರಿತು ಒಂದು ದಿನದ **ಉಪಗ್ರಹ ಆಧಾರಿತ ತರಬೇತಿ** ಆಯೋಜಿಸಿದ್ದು, ತಾವುಗಳು ಒಳಗೊಂಡಂತೆ ರಾಜ್ಯದ ಎಲ್ಲಾ ಗ್ರಾಮ ಪಂಚಾಯಿತಿಗಳ ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳು, ಅಧ್ಯಕ್ಷರುಗಳಿಗೆ ಹಾಗೂ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆಯ ಎಲ್ಲಾ ಜಿಲ್ಲಾ ಉಪನಿರ್ದೇಶಕರು, ತಾಲ್ಲೂಕಿನ ಮಕ್ಕಳ ಅಭಿವೃದ್ಧಿ ಯೋಜನಾಧಿಕಾರಿ(ಸಿ.ಡಿ.ಪಿ.ಓ), ಮತ್ತು ಎಲ್ಲಾ ಅಂಗನವಾಡಿ ಸೂಪರ್‌ವೈಸರ್‌ಗಳು ಕಡ್ಡಾಯವಾಗಿ ಹಾಜರಾಗುವಂತೆ ಕ್ರಮವಹಿಸಲು ತಮಗೆ ತಿಳಿಸಲು ನಿರ್ದೇಶಿತನಾಗಿದ್ದೇನೆ.

ತಮ್ಮ ವಿಶ್ವಾಸಿ,

(ಪಿ.ಶಿವಶಂಕರ್)
ನಿರ್ದೇಶಕರು(ಪಂ.ರಾಜ್-2)
ಪದನಿಮಿತ್ತ ಸರ್ಕಾರದ ಉಪಕಾರ್ಯದರ್ಶಿ
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

ಪ್ರತಿಯನ್ನು:

1. ಜಿಲ್ಲಾ ಉಪನಿರ್ದೇಶಕರುಗಳು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ (ಸಂಬಂಧಪಟ್ಟ ಜಿಲ್ಲಾ ಪಂಚಾಯಿತಿಯ ಮುಖ್ಯಕಾರ್ಯನಿರ್ವಾಹಕ ಅಧಿಕಾರಿಗಳ ಮುಖಾಂತರ)

2. ರಾಜ್ಯದ ಎಲ್ಲಾ ಮಕ್ಕಳ ಅಭಿವೃದ್ಧಿ ಯೋಜನಾಧಿಕಾರಿ(ಸಿ.ಡಿ.ಪಿ.ಓ). ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ (ಸಂಬಂಧಪಟ್ಟ ತಾಲ್ಲೂಕು ಪಂಚಾಯತ್‌ನ ಕಾರ್ಯನಿರ್ವಾಹಕ ಅಧಿಕಾರಿಗಳ ಮುಖಾಂತರ)
3. ರಾಜ್ಯದ ಎಲ್ಲಾ ಗ್ರಾಮ ಪಂಚಾಯಿತಿಗಳ ಅಧ್ಯಕ್ಷರುಗಳು (ಸಂಬಂಧಪಟ್ಟ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳ ಮುಖಾಂತರ).
4. ರಾಜ್ಯದ ಎಲ್ಲಾ ಅಂಗನವಾಡಿ ಮೇಲ್ವಿಚಾರಕರು. (ಸಂಬಂಧಪಟ್ಟ ತಾಲ್ಲೂಕು ಪಂಚಾಯತ್‌ನ ಕಾರ್ಯನಿರ್ವಾಹಕ ಅಧಿಕಾರಿಗಳ ಮುಖಾಂತರ)